ಶ್ರೀ ಕೆ.ಹೆಚ್. ರಂಗನಾಥ್ (ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು) :

ಅ) ರೂ. 76.75 ಲಕ್ಷಗಳು

ಆ) ಲಕ್ಕವಳ್ಳಿ ವನ್ಯಜೀವಿ ವಲಯ ರೂ. 29.64 ಲಕ್ಷಗಳು ತಣಿಗೆಬೈಲು ವನ್ಯಜೀವಿ ವಲಯ ರೂ. 9.29 ಲಕ್ಷಗಳು.

ತರೀಕೆರೆ ತಾಲ್ಲೂಕಿನ ನಬಾರ್ಡ್ ರಸ್ತೆಗಳು

1981(2353) - ಶ್ರೀ ನೀಲಕಂಠಪ್ಪ ಬಿ.ಆರ್. (ತರೀಕೆರೆ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ತರೀಕೆರೆ ತಾಲ್ಲೂಕಿನಲ್ಲಿ ಕಳೆದ ಮೂರು ಸಾಲುಗಳಲ್ಲಿ ನಬಾರ್ಡ್ ಯೋಜನೆಯಲ್ಲಿ ಎಷ್ಟು ಕಿ.ಮೀ. ರಸ್ತೆ ಹಾಗೂ ಎಷ್ಟು ಸೇತುವೆ ನಿರ್ಮಾಣ ಮಾಡಲಾಗಿದೆ.

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು) :

ಅ) ಚಿಕ್ಕಮಗಳೂರು ಜಿಲ್ಲೆ, ತರೀಕೆರೆ ತಾಲ್ಲೂಕಿನಲ್ಲಿ 1999-2000, 2000-2001 ಮತ್ತು 2001-2002ನೇ ವರ್ಷಗಳಲ್ಲಿ ಲೋಕೋಪಯೋಗಿ ಇಲಾಖೆಯಡಿ 25.10 ಕಿಮೀ ಗ್ರಾಮೀಣ ಹಾಗೂ ಜಿಲ್ಲಾ ಮುಖ್ಯ ರಸ್ತೆಗಳನ್ನು ಅಭಿವೃದ್ಧಿಪಡಿಸಿ ಡಾಂಬರು ಮಾಡಲಾಗಿದೆ. ಹಾಗೂ 24.26 ಕಿಮೀ ಉದ್ದದ ರಸ್ತೆ ಅಭಿವೃದ್ಧಿ ಕೆಲಸ ಪ್ರಗತಿಯಲ್ಲಿದೆ. ಇದಲ್ಲದೆ, ಒಂದು ಸೇತುವೆ ಅಗಲೀಕರಣವನ್ನು ಕೈಗೆತ್ತಿಕೊಂಡು ಪೂರ್ಣಗೊಳಿಸಲಾಗಿದೆ.

ಪರ್ಯಾಯ ವ್ಯವಸ್ಥೆಗೊಳಪಟ್ಟ ರಾಜ್ಯ ಹೆದ್ದಾರಿ ಪ್ರದೇಶದ ಸಮಸ್ಯೆಗಳು

1982(2425) - ಶ್ರೀ ಪ್ರಭಾಕರ ಬಂಗೇರ ಕೆ (ಬೆಳ್ತಂಗಡಿ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಷ್ಟ್ರೀಯ ಹೆದ್ದಾರಿ-48ರ ಪಾಣೆಮಂಗಳೂರು ಸೇತುವೆಯು ಬಿರುಕು ಬಿಟ್ಟಿರುವುದರಿಂದ ಮಾಡಲಾದ ಪರ್ಯಾಯ ವ್ಯವಸ್ಥೆಯ ಕಾರಣದಿಂದಾಗಿ ಕಡೂರು-ಬಂಟ್ವಳ ರಸ್ತೆ, ಸುಬ್ರಮಣ್ಯ-ಧರ್ಮಸ್ಥಳ ಉಡುಪಿ ರಸ್ತೆ, ಉಪ್ಪಿನಂಗಡಿ-ಗುರುವಾಯನಕೆರೆ ರಸ್ತೆ - ರಾಜ್ಯ ಹೆದ್ದಾರಿಗಳು ಭಾರಿ ವಾಹನಗಳ ಸಂಚಾರದಿಂದಾಗಿ ಸಂಪೂರ್ಣವಾಗಿ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಆ ಕುರಿತು ಜರುಗಿಸಿದ ಕ್ರಮಗಳೇನು;

ಆ) ಸದರಿ ಸೇತುವೆಯನ್ನು ದುರಸ್ತಿಗೊಳಿಸಿ ಎಲ್ಲಾ ವಾಹನಗಳ ಸಂಚಾರಕ್ಕೆ ಅನುಕೂಲ ಮಾಡಿಕೊಡುವ ಕುರಿತು ಸಕಾಲಿಕ ಯೋಜನೆಯನ್ನು ಸರ್ಕಾರದವರು ಕೈಗೊಳ್ಳುವರೆ; ದುಸ್ಥಿತಿಯಲ್ಲಿರುವ ರಾಜ್ಯ ಹೆದ್ದಾರಿಗಳನ್ನು ಕೂಡಲೇ ದುರಸ್ತಿಗೊಳಿಸಲು ಕ್ರಮ ಕೈಗೊಳ್ಳುವರೆ?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು) :

ಅ) ಸರ್ಕಾರದ ಗಮನಕ್ಕೆ ಬಂದಿದೆ, ರಸ್ತೆಗಳ ದುರಸ್ತಿಯನ್ನು ಮಾಡಲಾಗಿದ್ದು, ರಸ್ತೆಯನ್ನು ವಾಹನ ಸಂಚಾರಕ್ಕೆ ಯೋಗ್ಯ ರೀತಿಯಲ್ಲಿ ಇಡಲಾಗಿದೆ.

ಆ) ಪಾಣೆ ಮಂಗಳೂರು ಸೇತುವೆಯನ್ನು ದುರಸ್ತಿಗೊಳಿಸಲಾಗಿದ್ದು, ದಿನಾಂಕ 20-11-2002 ರಿಂದ ಎಲ್ಲಾ ವಾಹನಗಳ ಸಂಚಾರದ (ಭಾರಿ ವಾಹನಗಳನ್ನು ಹೊರತುಪಡಿಸಿ) ವ್ಯವಸ್ಥೆಯನ್ನು